## ವಿಧಾನ ಪರಿಷತ್ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ಇವರು ಮಂಡಿಸಿರುವ ನಿಯಮ-72ಕ್ಕೆ ಉತ್ತರ

**ವಿಷಯ:-**

**ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಜನವರಿ 2016 ರಿಂದ ಇದುವರೆವಿಗೂ ಸಾಕಷ್ಟು ಬೋಧಕ/ಬೋಧಕೇತರ ಹುದ್ದೆಗಳು ನಿವೃತ್ತಿ, ರಾಜೀನಾಮೆ ಇನ್ನಿತರೆ ಕಾರಣಗಳಿಂದ ಖಾಲಿ ಬಿದ್ದಿವೆ. ಖಾಲಿ ಇರುವ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸರ್ಕಾರ ಅನುಮತಿ ನೀಡದೆ ಇರುವುದರಿಂದ ಅನುದಾನಿತ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳ ಬೋಧನೆಗೆ ತುಂಬಾ ತೊಂದರೆಯಾಗುತ್ತಿದೆ. ಅಲ್ಲದೆ ಕೆಲವು ಶಾಲಾ ಕಾಲೇಜುಗಳನ್ನು ಮುಚ್ಚುವ ಪರಿಸ್ಥಿತಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಪ್ರಸ್ತಾಪಿಸಲಾಗಿದೆ.**

**ಉತ್ತರ:**

ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಹೆಚ್ಚುವರಿ ಎಂದು ಗುರುತಿಸಲಾಗುವ ಶಿಕ್ಷಕರುಗಳಿಂದ ಭರ್ತಿ ಮಾಡಲಾಗುತ್ತಿದೆ. ಖಾಸಗಿ ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.

ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಆರ್ಥಿಕ ಇಲಾಖೆಯ ಸಹಮತಿಯನ್ನು ಕೋರಲಾಗಿತ್ತು. ಆದರೆ, ಆರ್ಥಿಕ ಇಲಾಖೆಯು ದಿನಾಂಕ:28.11.2022ರಂದು ನೀಡಿರುವ ಅಭಿಪ್ರಾಯದಲ್ಲಿ ದಿನಾಂಕ:31.12.2015ರ ಅಂತ್ಯಕ್ಕೆ ಖಾಲಿಯಾಗಿರುವ ಪ್ರೌಢಶಾಲಾ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಆದ್ಯತೆ ನೀಡುವಂತೆ ತಿಳಿಸಿರುತ್ತದೆ. ಆದ್ದರಿಂದ ದಿನಾಂಕ:31.12.2015ರ ಪೂರ್ವದಲ್ಲಿ ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಿದ ನಂತರ ದಿನಾಂಕ:01.01.2016ರ ನಂತರ ಖಾಲಿಯಾಗಿರುವ ಪ್ರೌಢಶಾಲಾ ಶಿಕ್ಷಕ ಹುದ್ದೆಗಳನ್ನು ಭರ್ತಿ ಮಾಡಲು ನಿಯಮಾನುಸಾರ ಪರಿಶೀಲಿಸಲಾಗುವುದು.

ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ 2016 ರಿಂದ ಇದುವರೆಗೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಹುದ್ದೆಗಳಿಗೆ ಭರ್ತಿ ಮಾಡಲು ಅವಕಾಶ ಕಲ್ಪಿಸಿರುವುದಿಲ್ಲ. ಆದರೆ, ಇಲಾಖೆಯು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಅಡ್ಡಿಯಾಗದಂತೆ ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಕಾರ್ಯಭಾರ ಕೊರತೆಯಿರುವ ಉಪನ್ಯಾಸಕರನ್ನು ಹತ್ತಿರದ ಅಗತ್ಯವಿರುವ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ನಿಯೋಜನೆಗೊಳಿಸುವ ಮೂಲಕ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗದಂತೆ ಕ್ರಮವಹಿಸಲಾಗುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಇಡಿ 144 ಟಿಪಿಯು 2016 ದಿನಾಂಕ 09-02-2017, 12-06-2017, 12- 09-2017, 23-07-2021, 02-08-2021 ಮತ್ತು 22-08-2022 ವಿವಿಧ ಆದೇಶಗಳಲ್ಲಿ ದಿನಾಂಕ: 31-12-2015 ರವರಗೆ ವಿವಿಧ ಕಾರಣಗಳಿಂದ ತೆರವಾದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ ಭರ್ತಿ ಮಾಡಲು ಅವಕಾಶ ಕಲ್ಪಿಸಿ ಆದೇಶಿಸಿದೆ ಅದರಂತೆ, ಇಲಾಖೆಯು ಆಡಳಿತ ಮಂಡಳಿಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಅರ್ಹ ಪ್ರಸ್ತಾವನೆಗಳಿಗೆ ಭರ್ತಿ ಮಾಡಲು ಅನುಮತಿ ನೀಡಲಾಗುತ್ತಿದೆ.

**ಸಂಖ್ಯೆ: ಇಪಿ 247 ಎಸ್ಇಎಸ್ 2023**

(ಎಸ್.ಮಧುಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**